ದಿನಾಂಕ 06.10.2023 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣವಚನ ಬೋಧಿಸಲಾಯಿತು.

ಪಾಟೀ ಸವಾಲುಃ- ವಾದಿ ಪರ ವಕೀಲರಿಂದಃ-

ನಮ್ಮ ಮನೆಯಿಂದ ಪ್ರತಿವಾದಿ ಮನೆಗೆ 60 ಕಿ.ಮೀ ಅಂತರವಿದೆ. ನಾನು ಡಿಸೆಂಬರ್ 2011 ರಲ್ಲಿ ಬೆಂಗಳೂರಿನಲ್ಲಿ ಉದ್ಯೋಗದಲ್ಲಿದ್ದೆ. ಪ್ರತಿವಾದಿಗೆ ಅಪಘಾತವಾಗಿದೆ ಎನ್ನಲಾದ ವಾರ ನನಗೆ ಗೊತ್ತಿಲ್ಲ. ದಿಃ14.12.2011 ರಂದು ಕೆಲಸಕ್ಕೆ ರಜೆ ಹಾಕಿ ಗ್ರಾಮಕ್ಕೆ ಬಂದಿರಲಿಲ್ಲ. ಆದರೆ ಅನುಮತಿ ಪಡೆದು ನಮ್ಮ ಗ್ರಾಮಕ್ಕೆ ಬಂದಿದ್ದೆ. ದಿಃ 14.12.2011 ರಂದು ಬೆಳಿಗ್ಗೆ 9 ಗಂಟೆಗೆ ನಾನು ಕಂಪನಿಗೆ ಅನುಮತಿ ಪಡೆದುಕೊಂಡು 9.30 ಗಂಟೆಗೆ ಕಂಪನಿಯಿಂದ ಊರಿಗೆ ಬಂದಿರುತ್ತೇನೆ. ಬೆಂಗಳೂರಿನಿಂದ ನಮ್ಮ ಊರಿಗೆ 350 ಕಿ. ಮೀ ಅಂತರವಿದೆ. ಪ್ರತಿವಾದಿ ನನ್ನ ಭಾವನಾಗಿದ್ದು, ಅವರನ್ನು ನೋಡಲು ನಾನು ಬೆಂಗಳೂರಿನಿಂದ ಬಂದಿದ್ದೇನೆ. ದಿಃ 14.12.2011 ರಂದು ಸಂಜೆ ಪ್ರತಿವಾದಿ ಮಧ್ಯಪಾನ ಮಾಡಿ ರಸ್ತೆಯ ಬಿದ್ದಿದ್ದ ವಿಚಾರ ನನಗೆ ಗೊತ್ತಿಲ್ಲ. ಈ ದಿವಸ ನ್ಯಾಯಾಲಯಕ್ಕೆ ಪ್ರತಿವಾದಿಯು ನನ್ನನ್ನು ಕರೆದುಕೊಂಡು ಬಂದಿರುತ್ತಾರೆ. ನನ್ನ ಮುಖ್ಯ ವಿಚಾರಣೆಯ ಪ್ರಮಾಣಪತ್ರದಲ್ಲಿನ ಒಕ್ಕಣೆಗಳನ್ನು ಪ್ರತಿವಾದಿ ಹೇಳಿ ಬರೆಸಿರುತ್ತಾರೆ ಎಂದರೆ ಸರಿ. ಪ್ರತಿವಾದಿಗೆ ಅಪಘಾತವಾಗಿದ್ದನ್ನು ನಾನು ನೋಡಿದ ಬಗ್ಗೆ ಪೊಲೀಸರಿಗೆ ದೂರನ್ನು ನೀಡಿರುವುದಿಲ್ಲ. ನಾನು ಪೊಲೀಸ್ ಠಾಣೆಗೆ ಹೋಗಿ ಪ್ರತಿವಾದಿಗೆ ಆದ ಅಪಘಾತವನ್ನು ನೋಡಿದ ಬಗ್ಗೆ ಪೊಲೀಸರಿಗೆ ತಿಳಿಸಿರುವುದಿಲ್ಲ. ಅಪಘಾತಕ್ಕೆ ಸಂಬಂಧಿಸಿದಂತೆ ದೂರನ್ನು ಯಾರು ನೀಡಿದರು ಎಂಬುದನ್ನು ನನಗೆ ಗೊತ್ತಿಲ್ಲ. ಸಿವಿಲ್ ವ್ಯಾಜ್ಯಕ್ಕೆ ಸಂಬಂಧಿಸಿದಂತೆ ವಾದಿಯ ಬಗ್ಗೆ ಪ್ರತಿವಾದಿಗೆ ವೈಮನಸ್ಸು ಇರುವ ವಿಚಾರ ನನಗೆ ಗೊತ್ತು.

ಕೊಲೆ ಪ್ರಯತ್ನಕ್ಕೆ ಸಂಬಂಧಿಸಿದಂತೆ ಪ್ರತಿವಾದಿಯು ವಾದಿಯ ವಿರುದ್ಧ ಮಡಿಕೇರಿ ಜಿಲ್ಲಾ ನ್ಯಾಯಾಲಯದಲ್ಲಿ ಪ್ರಕರಣ ದಾಖಲಿಸಿದ್ದ ವಿಚಾರ ನನಗೆ ಗೊತ್ತಿದೆ. ಜಿಲ್ಲಾ ನ್ಯಾಯಾಲಯದ ಪ್ರಕರಣದಲ್ಲಿ ನಾನು ಅಪಘಾತವನ್ನು ನೋಡಿದ ಬಗ್ಗೆ ಸಾಕ್ಷ್ಯ ನುಡಿದಿಲ್ಲ. ಅಪಘಾತದಿಂದ ನನಗೆ ಯಾವುದೇ ಗಾಯಗಳು ಆಗಿರುವುದಿಲ್ಲ. ಪ್ರತಿವಾದಿ ನನ್ನ ಭಾವನೆಂದು ನನ್ನ ಮುಖ್ಯ ವಿಚಾರಣೆಯ ಪ್ರಮಾಣಪತ್ರದಲ್ಲಿ ತಿಳಿಸಿದ ಬಗ್ಗೆ ನನಗೆ ಗೊತ್ತಿರುವುದಿಲ್ಲ. ಪ್ರತಿವಾದಿಯು ಮದ್ಯಪಾನ ಮಾಡಿ ರಸ್ತೆಯಲ್ಲಿ ಬಿದ್ದ ವಿಚಾರ ನನಗೆ ಗೊತ್ತಿದ್ದರೂ ಸಹ ಪ್ರತಿವಾದಿಗೆ ಅನುಕೂಲ ಮಾಡಿಕೊಡುವ ಉದ್ದೇಶದಿಂದ ಸುಳ್ಳು ಪ್ರಮಾಣಪತ್ರವನ್ನು ಸಲ್ಲಿಸಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ದಿಃ 14.12.2011 ರಂದು ನಾನು ಬೆಂಗಳೂರಿನಲ್ಲಿ ಉದ್ಯೋಗದಲ್ಲಿ ಇದ್ದರೂ ಸಹ ನ್ಯಾಯಾಲಯದಲ್ಲಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಪ್ರತಿವಾದಿಯು ವಾದಿಯ ವಿರುದ್ಧ ದಾಖಲಿಸಿದ್ದ ಕ್ರಿಮಿನಲ್ ಪ್ರಕರಣದಲ್ಲಿ ವಾದಿಯು ಖುಲಾಸೆಯಾದ ವಿಚಾರ ನನಗೆ ಗೊತ್ತಿಲ್ಲ.

<u>ಮರು ವಿಚಾರಣೆಃ</u>**- ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿದಾರರ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸ ಇ

ಸಹಿಃ
ಹಿರಿಯ ಸಿವಿಲ್ ನ್ಯಾಯಾಧೀಶರು
ವಿರಾಜಪೇಟೆ.

(ಸಾಕ್ಷಿದಾರರ ಸಹಿ)